**ಅಧಿಕ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ನ್ಯಾಯಾಲಯ, ಅರಕಲಗೂಡು**

**ಸಿ. ಸಿ. ನಂಃ1027/2018**

| | | | | | |
|---|---|---|---|---|---|
| ಸಾಕ್ಷಿಯ ಹೆಸರು | ಃ | ಅಶೋಕ | **ದಿನಾಂಕ** | ಃ | **06/07/2024** |
| ತಂದೆಯ ಹೆಸರು | ಃ | ದಾಸೇಗೌಡ | **ಸಿ ಡಬ್ಲ್ಯೂ** | ಃ | **05** |
| ವಯಸ್ಸು | ಃ | **60** ವರ್ಷ | **ಪಿ ಡಬ್ಲ್ಯೂ** | ಃ | **04** |
| ಉದ್ಯೋಗ | ಃ | ವ್ಯವಸಾಯ | | | |
| ವಿಳಾಸ | ಃ | ಹೆಂಟಗೆರೆ ಕೊಪ್ಪಲು ಗ್ರಾಮ | | | |

ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ ಸಸಅ ರವರಿಂದಃ

ಆರೋಪಿ ಗೊತ್ತಿಲ್ಲ, ಚಾಸಾ-1 ನನಗೆ ಗೊತ್ತಿಲ್ಲ. ಮೃತ ಹುಚ್ಚಣ್ಣಯ್ಯ ನನಗೆ ಗೊತ್ತಿಲ್ಲ. ಸಾಕ್ಷಿಗೆ ನಿಪಿ-4 ನ್ನು ತೋರಿಸಲಾಗಿ, ಸಾಕ್ಷಿಯು ಅದರಲ್ಲಿನ ತನ್ನ ಸಹಿಯನ್ನು ಗುರುತಿಸಿದ ಮೇರೆಗೆ ಸದರಿ ಸಾಕ್ಷಿಯ ಸಹಿಯನ್ನು ನಿಪಿ-4(ಬಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಸುಮಾರು 4-5 ವರ್ಷಗಳ ಹಿಂದೆ ಕೊಣನೂರು ಪೊಲೀಸ್ ಠಾಣೆಯಲ್ಲಿ ಮಾಡಿರುತ್ತೇನೆ. ನನ್ನ ಜೊತೆ ನಿಪಿ-4 ಕ್ಕೆ ಬೇರೆ ಯಾರು ಸಹಿ ಮಾಡಿರುವುದಿಲ್ಲ. ನಿಪಿ-4 ರಲ್ಲಿ ಏನು ಬರೆಯಲಾಗಿದೆ ಎಂದು ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ವಾಹನಗಳನ್ನು ಅಮಾನತ್ತು ಪಡಿಸಿಕೊಂಡಿಲ್ಲ. ಭಾವಚಿತ್ರದಲ್ಲಿರುವ ಬೈಕ್ ನ್ನು ನಾನು ನೋಡಿರುವುದಿಲ್ಲ

(ಈ ಹಂತದಲ್ಲಿ ಮಾನ್ಯ ಎಪಿಪಿಯವರು ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ಕೋರಿರುತ್ತಾರೆ, ಪರಿಶೀಲಿಸಿ ಅನುಮತಿ ನೀಡಲಾಯಿತು)

ಪಾಟೀ ಸವಾಲುಃ ಎಪಿಪಿಯವರಿಂದಃ

ದಿಃ17-09-2018 ರಂದು ಕೊಣನೂರು ಪೊಲೀಸ್ ಠಾಣೆಯ ಹಿಂಭಾಗದಲ್ಲಿ ಬೆಳಗ್ಗೆ 10.30 ರಿಂದ 11.15 ಗಂಟೆಯವರೆಗೆ ನಿಪಿ-4 ರಂತೆ ಮಹಜರ್ ನ್ನುಜರುಗಿಸಿ ಕೆಎ-09-ಡಬ್ಲ್ಯೂ-3229 ರ ವಾಹನವನ್ನು ನನ್ನ ಹಾಗೂ ಚಾಸಾ-4 ಮತ್ತು ಚಾಸಾ-6 ರವರುಗಳ ಸಮಕ್ಷಮ ಅಮಾನತ್ತು ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಸಮಯದಲ್ಲಿ ನಾನು ಸ್ಥಳದಲ್ಲಿ ಹಾಜರಿದ್ದು, ಅದರ ಅಂಶಗಳನ್ನು ತಿಳಿದುಕೊಂಡು ಅದಕ್ಕೆ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ನನಗೆ ಈ ಪ್ರಕರಣದ ಎಲ್ಲಾ ವಿಚಾರಗಳು

ಗೊತ್ತಿದ್ದರು ಕೂಡ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ ಆರೋಪಿಯ ಪರ ವಕೀಲರು ಏನು ಇಲ್ಲ ಎಂದು ನುಡಿದಿರುತ್ತಾರೆ.)

(ಮರು ವಿಚಾರಣೆ ಇಲ್ಲ)

( ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓ.ಹೇ.ಕೇ.ಸ.ಇದೆ.

(ಶ್ರೀಮತಿ. ಚೇತನಾ )
ಅಧಿಕ ಸಿವಿಲ್ ನ್ಯಾಯಾಧೀಶರು,
ಅರಕಲಗೂಡು.